# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಸಂಖ್ಯೆ | : | 516 |
| ಸದಸ್ಯರ ಹೆಸರು | : | ಶ್ರೀ.ಸಿ.ಎಂ.ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 16-12-2021. |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ರಾಜ್ಯದಲ್ಲಿ ಅಲ್ಪಸಂಖ್ಯಾತ ಹುಡ್ದಗಳಿಗೆ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಸರ್ಕಾರವು ನೀಡುವ ಸೌಲಭ್ಯಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | **ಅಲ್ಪಸಂಖ್ಯಾತರ ನಿರ್ದೇಶನಾಲಯ**<br>• ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಹೊರದೇಶಗಳಲ್ಲಿ ಉನ್ನತ ವ್ಯಾಸಂಗ ಮಾಡಲು ಸ್ನಾತಕೋತ್ತರ, ಪಿಹೆಚ್‌ಡಿ ಮತ್ತು ಪೋಸ್ಟ್ ಡಾಕ್ಟರೇಟ್ ಕೋರ್ಸ್ ಮುಂತಾದವುಗಳನ್ನು ವಿದೇಶದ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಸಂಗ ಮಾಡಲು ವಿದ್ಯಾರ್ಥಿವೇತನ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.<br>• ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನ 6 ಲಕ್ಷಕ್ಕಿಂತ ಕಡಿಮೆ ಇರುವಂತಹ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ ಗರಿಷ್ಠ 20 ಲಕ್ಷ<br>• 6 ಲಕ್ಷಕ್ಕಿಂತ 15 ಲಕ್ಷ ಇರುವ ವಾರ್ಷಿಕ ವರಮಾನದ ವಿದ್ಯಾರ್ಥಿಗಳಿಗೆ 2 ವರ್ಷಕ್ಕೆ 10 ಲಕ್ಷ ವಿದ್ಯಾರ್ಥಿವೇತನವನ್ನು ನೀಡಲಾಗುವುದು.<br>ಈ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಯ 1 ಅಥವಾ 2 ವರ್ಷಗಳ ಅವಧಿಗೆ ಮಾತ್ರ ನೀಡಲಾಗುವುದು.<br>**ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ**<br>ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ನೇರಸಾಲ ಯೋಜನೆ ಅಡಿಯಲ್ಲಿ ಮಾತ್ರ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಉನ್ನತ ಶಿಕ್ಷಣಕ್ಕಾಗಿ ಸಾಲ ಸೌಲಭ್ಯ ಕಲ್ಪಿಸಲಾಗುವುದು. |
| ಆ. | ಕಳೆದ 3 ವರ್ಷಗಳಲ್ಲಿ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಎಷ್ಟು ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಅರ್ಜಿ ಸಲ್ಲಿಕೆಯಾಗಿತ್ತು; ಅದರಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಸದರಿ ಸೌಲಭ್ಯದ ಫಲಾನುಭವಿಗಳಾಗಿದ್ದಾರೆ; (ವಾರ್ಷಿಕವಾರು, ಅಂಕಿ-ಅಂಶಗಳ ಸಂಪೂರ್ಣ ಮಾಹಿತಿ ನೀಡುವುದು) | **ಅಲ್ಪಸಂಖ್ಯಾತರ ನಿರ್ದೇಶನಾಲಯ**<br>ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಕಳೆದ 3 ವರ್ಷಗಳಲ್ಲಿ ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯಲು ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಮತ್ತು ಫಲಾನುಭವಿಗಳ ವಿವರ ಕೆಳಕಂಡಂತಿದೆ. |

| ಕ್ರ.ಸಂ | ವರ್ಷ | ಸ್ವೀಕೃತವಾದ ಅರ್ಜಿಗಳ ಸಂಖ್ಯೆ | | ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ | |
|---|---|---|---|---|---|
| | | ಹೊಸ | ನವೀಕರಣ | ಹೊಸ | ನವೀಕರಣ |
| 1 | 2018-19 | 513 | 182 | 267 | 175 |
| 2 | 2019-20 | 415 | 235 | 247 | 234 |
| 3 | 2020-21 | 0 | 215 | 0 | 193 |

|  |  | **ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ**<br><br>ಕ್ರ.ಸಂ / ವರ್ಷ / ಒಟ್ಟು ಸಲ್ಲಿಕೆಯಾದ ಅರ್ಜಿಗಳು / ಒಟ್ಟು ಸೌಲಭ್ಯ ಪಡೆದ ವಿದ್ಯಾರ್ಥಿಗಳು<br>1 / 2018-19 / 15 / 15<br>2 / 2019-20 / 15 / 15<br>3 / 2020-21 / 22 / 14 |
|---|---|---|
| ಇ. | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳೆಷ್ಟು (ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ, ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳು ಅಂಕಿ-ಅಂಶಗಳ ತಾಲ್ಲೂಕುವಾರು ಮಾಹಿತಿ ನೀಡುವುದು); ಈ ರೀತಿಯ ವಸತಿ ನಿಲಯಗಳಲ್ಲಿ ಸ್ವಚ್ಛತೆ ಮತ್ತು ಮೇಲ್ವಿಚಾರಣೆಗಳ ಬಗ್ಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳೇನು? | **ಅಲ್ಪಸಂಖ್ಯಾತರ ನಿರ್ದೇಶನಾಲಯ**<br>ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 304 ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿದೆ. ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ಹಾಗೂ ಪದವಿ, ಬಾಲಕ ಮತ್ತು ಬಾಲಕಿಯರ ವಸತಿನಿಲಯಗಳು ಅಂಕಿ-ಅಂಶಗಳ ತಾಲ್ಲೂಕುವಾರು ಮಾಹಿತಿಯ ವಿವರ **"ಅನುಭಂದ-01"** ರಲ್ಲಿ ನೀಡಲಾಗಿದೆ.<br><br>ವಸತಿ ನಿಲಯಗಳ ಮೇಲ್ವಿಚಾರಣೆ, ನಿರ್ವಹಣೆ, ಸ್ವಚ್ಛತೆಗಾಗಿ ನಿಲಯಪಾಲಕರೊಂದಿಗೆ ಸ್ವಚ್ಛತಾ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.<br>• ಕಾಲ ಕಾಲಕ್ಕೆ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ವಸತಿನಿಲಯಗಳಿಗೆ ಭೇಟಿ ನೀಡಿ ಮೇಲ್ವಿಚಾರಣೆ ನಡೆಸುತ್ತಾರೆ.<br>• ಪ್ರಸ್ತುತ ಕೋವಿಡ್-19ನ ಸಾಂಕ್ರಾಮಿಕ ರೋಗದ ಕಾರಣ ಸ್ವಚ್ಛತೆಯ ಬಗ್ಗೆ ತೀವ್ರವಾದ ನಿಗಾ ವಹಿಸಲಾಗುತ್ತಿದೆ.<br>• SOP ನಿಯಮಾವಳಿಯ ಪ್ರಕಾರ ವಸತಿ ನಿಲಯಗಳಲ್ಲಿ ಸ್ವಚ್ಛತೆಗೆ ಆದ್ಯತೆಯನ್ನು ನೀಡಿ, ಸ್ವಚ್ಛತೆಯಿಂದ ವಸತಿ ನಿಲಯಗಳನ್ನು ಶುಚಿಯಾಗಿ ಇಟ್ಟು ಕೊಳ್ಳಲು ಕ್ರಮವಹಿಸಲಾಗಿದೆ.<br>• ವಿದ್ಯಾರ್ಥಿನಿಲಯಗಳನ್ನು ಕಾಲ-ಕಾಲಕ್ಕೆ ಸ್ಯಾನಿಟೈಜೇಷನ್ ಮಾಡಲಾಗುತ್ತಿದ್ದು, ಕೋವಿಡ್-19 ಸಾಂಕ್ರಾಮಿಕ ರೋಗವನ್ನು ಎದುರಿಸಲು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ ಹಾಗೂ ಕಾಲ-ಕಾಲಕ್ಕೆ ಕೋವಿಡ್ ಟೆಸ್ಟ್ ಮಾಡಿಸಲಾಗುತ್ತಿದೆ.<br>• ದಿನಕ್ಕೆ ಎರಡು ಬಾರಿ ವಿದ್ಯಾರ್ಥಿಗಳ ದೇಹದ ಉಷ್ಣಾಂಶದ ತಪಾಸಣೆ ಮಾಡಿ, ವಹಿಯಲ್ಲಿ ದಾಖಲಿಸಲಾಗುತ್ತಿದೆ. ಒಂದು ವೇಳೆ ಉಷ್ಣಾಂಶವು ಹೆಚ್ಚಾಗಿದ್ದಲ್ಲಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಂಪರ್ಕಿಸಿ, ವೈದ್ಯಕೀಯ ಚಿಕಿತ್ಸೆಯನ್ನು ನೀಡುವ ವ್ಯವಸ್ಥೆಯನ್ನು ಮಾಡಲಾಗಿದೆ.<br>• 2021-22ನೇ ಶೈಕ್ಷಣಿಕ ವರ್ಷದಲ್ಲಿ ಎಲ್ಲಾ ವಸತಿ ನಿಲಯಗಳಲ್ಲಿ ಸ್ವಚ್ಛತಾ ಸಪ್ತಾಹ ನಿರ್ವಹಿಸಲಾಗಿದೆ. |

ಸಂಖ್ಯೆ: **MWD 286 LMQ 2021**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ